# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,**

**ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.**

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 08.04.2022 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

**ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ. ಡಾ॥ ಮುರಳಿಧರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಜಿ.ನಾಗಭೂಷಣ್ ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀ.ರಮೇಶ್.ಡಿ.ಎಂ, ಹಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀ.ಕೆ.ಶ್ರೀನಿವಾಸಯ್ಯ. ಸಹ ಕಂದಾಯ ಅಧಿಕಾರಿ, ಕಂದಾಯ ಇಲಾಖೆ.
5. ಶ್ರೀ.ಮುತ್ತೇಗೌಡ.ವಿ ಕಿರಿಯ ಆರೋಗ್ಯ ಪರಿವೀಕ್ಷಕರು.
6. ಶ್ರೀ.ಶ್ರೀ.ನಿವಾಸ.ಸಿ.ಪಿ, ವ್ಯವಸ್ಥಾಪಕರು, ಕಲ್ಯಾಣ ಇಲಾಖೆ.
7. ಶ್ರೀ.ರಮೇಶ್.ಬಿ, ಸಹಾಯಕ ಅಭಿಯಂತರರು, ಯೋಜನೆ ವಿಭಾಗ.
8. ಅಮರನಾಥ್.ಎಂ, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.
9. ಶ್ರೀ.ವಿವೇಕ್.ಎಂ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ (ಎಸ್.ಟಿ.ಪಿ).
10. ಶ್ರೀ.ಆನಂದ್ ಪಡಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ (ಪ್ರಾಜೆಕ್ಟ್).
11. ಶ್ರೀ.ಪವನ್.ಎಂ.ಜೆ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
12. ಶ್ರೀ.ಪರಮೇಶಯ್ಯ. ಕಿರಿಯ ಅಭಿಯಂತರರು, ಬೆಸ್ಕಾಂ, ದೊಡ್ಡಬಿದರಕಲ್ಲು.
13. ಶ್ರೀ.ಓಬಯ್ಯ, ಸಹಾಯಕ ಅಭಿಯಂತರರು, ಬೆಸ್ಕಾಂ, ಅಂದ್ರಹಳ್ಳಿ.
14. ಶ್ರೀ.ಶಶಿಧರ್.ಎಸ್.ಆರ್, ಕಿರಿಯ ಅಭಿಯಂತರರು, ಬೆಸ್ಕಾಂ, ಅಂದ್ರಹಳ್ಳಿ
15. ಶ್ರೀಮತಿ.ಲಕ್ಷ್ಮಿ.ಕೆ.ಆರ್, ಸಹಾಯಕ ಅಭಿಯಂತರರು, ಘನ ತ್ಯಾಜ್ಯ ಸಂಗ್ರಹಣಾ ಘಟಕ, ತಿಪ್ಪೇನಹಳ್ಳಿ
16. ಶ್ರೀ.ಮಂಜುನಾಥ, ಎ.ಎಸ್.ಐ, ಪೀಣ್ಯ ಪೋಲೀಸ್ ಠಾಣೆ.
17. ಶ್ರೀ.ಹೆಚ್.ಕೆ.ಕಗ್ಗಲಯ್ಯ, ಮೇಸ್ತ್ರಿ, ತೋಟಗಾರಿಕೆ ಇಲಾಖೆ.
18. ಶ್ರೀ.ನಿಂಗಪ್ಪ, ಮಾರ್ಷಲ್, ದೊಡ್ಡಬಿದರಕಲ್ಲು.

**ವಾರ್ಡ್ ಸಮಿತಿ ಸದಸ್ಯರುಗಳು.**

1. ಶ್ರೀ.ಕೂರ್ಲಪ್ಪ, ತಿಗಳರಪಾಳ್ಯ, ಸದಸ್ಯರು.
2. ಶ್ರೀ.ಸತೀಶ್, ಹೊಸಹಳ್ಳಿ, ಸದಸ್ಯರು
3. ಶ್ರೀ.ಮಾಲತೇಶ್.ಹೆಚ್.ಟಿ, ದೊಡ್ಡಬಿದರಕಲ್ಲು, ಸದಸ್ಯರು.
4. ಶ್ರೀ.ಮಂಜುನಾಥ್.ಎಂ, ಚನ್ನನಾಯಕನಪಾಳ್ಯ, ಸದಸ್ಯರು.
5. ಶ್ರೀ.ನಟರಾಜ್, ವಿದ್ಯಾಮಾನ್ಯನಗರ, ಸದಸ್ಯರು.
6. ಶ್ರೀ.ಗರುಡಪ್ಪ, ತಿಗಳರಪಾಳ್ಯ, ಸದಸ್ಯರು.
7. ಶ್ರೀಮತಿ.ಸುಮಿತ್ರಮ್ಮ, ಸಾಯಿಬಾಬಾ ಲೇಔಟ್, ಸದಸ್ಯರು.
8. ಶ್ರೀಮತಿ.ಮಂಗಳಮ್ಮ, ಮಾರಣ್ಣ ಲೇಔಟ್, ದೊಡ್ಡಬಿದರಕಲ್ಲು, ಸದಸ್ಯರು.

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.**

1. ಶ್ರೀ.ರಮೇಶ್, ಪಶು ವೈದ್ಯರು.
2. ಶ್ರೀ.ಚಂದ್ರಶೇಖರ್, ಅರಣ್ಯ ಇಲಾಖೆ.
3. ಶ್ರೀಮತಿ.ಪೂರ್ಣಿಮಾ.ಜಿ.ಟಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಎಂ, ಕೆಂಗೇರಿ
4. ಶ್ರೀಮತಿ.ಅನುಪಮ.ಡಿ, ವೈದ್ಯಾಧಿಕಾರಿಗಳು, ತಿಪ್ಪೇನಹಳ್ಳಿ ಸರ್ಕಾರಿ.
5. ಶ್ರೀಮತಿ.ಅಮೃತಸಾಯಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆ ವಿಭಾಗ.
6. ಶ್ರೀ.ಶಿವರುದ್ರಪ್ಪ, ಪಿ.ಎಸ್.ಐ, ಪೀಣ್ಯ ಪೋಲೀಸ್ ಠಾಣೆ (ಟ್ರಾಫಿಕ್).
7. ಶ್ರೀ.ರವಿಕುಮಾರ್, ಪಿ.ಐ, ಬ್ಯಾಡರಹಳ್ಳಿ ಪೋಲೀಸ್ ಠಾಣೆ.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯಲ್ಲಿ ಎಲ್ಲಾ ಸದಸ್ಯರುಗಳು ಹಾಗೂ ಅಧಿಕಾರಿಗಳು ಸ್ವಾಗತವನ್ನು ಕೋರಿ ಸಭೆಯ ಉದ್ದೇಶವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳು ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. **ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.**

- ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 3,850 ಮಕ್ಕಳಿಗೆ ಲಸಿಕೆ ಹಾಕುವ ಗುರಿಯಿದ್ದು, ಈಗಾಗಲೇ 850 ಮಕ್ಕಳಿಗೆ ಲಸಿಕೆಯನ್ನು ಹಾಕಲಾಗಿರುತ್ತದೆ.
- ವಾರ್ಡ್ ವ್ಯಾಪ್ತಿಯಲ್ಲಿ ಉಪ ಆರೋಗ್ಯ ಕೇಂದ್ರಗಳನ್ನು ತೆರೆಯಲು ಸರ್ಕಾರಿ ಕಟ್ಟಡಗಳು ಲಭ್ಯವಿದ್ದಲ್ಲಿ ಆರೋಗ್ಯ ಇಲಾಖೆಗೆ ವರ್ಗಾಯಿಸಿ ಕೊಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಸದಸ್ಯರುಗಳು ನೋಡಲ್ ಅಧಿಕಾರಿಯವರೊಂದಿಗೆ ಚರ್ಚಿಸಿ ಕರಿಹೋಬನಹಳ್ಳಿ ಯೋಗ ಭವನ ಹಾಗೂ ಹೊಸಹಳ್ಳಿ ಸರ್ಕಾರಿ ಶಾಲೆಯಲ್ಲಿ ಕೊಠಡಿಗಳು ಖಾಲಿ ಇದ್ದು, ಇದನ್ನು ಉಪ ಆರೋಗ್ಯ ಕೇಂದ್ರ ತೆರೆಯಲು ಸ್ಥಳಾವಕಾಶ ಕೊಡುವಂತೆ ಸರ್ವಾನುಮತದಿಂದ ಸಭೆಯಲ್ಲಿ ಚರ್ಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ತಿಪ್ಪೇನಹಳ್ಳಿ ಆರೋಗ್ಯ ಕೇಂದ್ರಕ್ಕೆ ಸಂಬಂಧಿಸಿದಂತೆ, ಅಲ್ಲಿನ ಸಿಬ್ಬಂದಿಗಳು ತಮ್ಮ ಖಾತೆಗೆ ಅನಧಿಕೃತವಾಗಿ ಹಣ ಜಮಾ ಮಾಡಿಕೊಂಡಿರುವುದಾಗಿ ದೂರು ಬಂದಿದ್ದು, ಈ ಬಗ್ಗೆ ಪರಿಶೀಲಿಸಿ ಮುಂದಿನ ಸಭೆಯಲ್ಲಿ ವರದಿ ನೀಡುವಂತೆ ನೋಡಲ್ ಅಧಿಕಾರಿಯವರು ಸಂಬಂಧಪಟ್ಟ ಅಧಿಕಾರಿಯವರಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀಮತಿ.ತಿಮ್ಮಮ್ಮ (ಮೊ.ನಂ.9972250387) ಎಂಬುವವರ ಪತಿಯು ಕೋವಿಡ್ ನಿಂದ ಮರಣ ಹೊಂದಿದ್ದು, ಕೋವಿಡ್ ನಿಂದ ಮರಣ ಹೊಂದಿರುವ ಕುಟುಂಬಗಳಿಗೆ ಸರ್ಕಾರದಿಂದ ಬರುವ ಪರಿಹಾರ ಹಣವು ಅವರಿಗೆ ತಲುಪಿರುವುದಿಲ್ಲ ಎಂದು ದೂರು ನೀಡಿದ್ದು, ಈ ಬಗ್ಗೆ ಪರಿಶೀಲಿಸಿ ಸದರಿಯವರಿಗೆ ಪರಿಹಾರ ಹಣವನ್ನು ಪಾವತಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ನೋಡಲ್ ಅಧಿಕಾರಿಯವರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ಕಾರ್ಖಾನೆಗಳಿಂದ ಅತಿಯಾಗಿ ಶಬ್ದ ಬರುತ್ತಿರುವುದಾಗಿ ಸದಸ್ಯರುಗಳು ಸಭೆಯಲ್ಲಿ ತಿಳಿಸಿದ್ದು, ನಂತರ ನೋಡಲ್ ಅಧಿಕಾರಿಯವರು ಮಾತನಾಡಿ ಸದರಿ ಕಾರ್ಖಾನೆಗಳಿಗೆ ತಿಳುವಳಿಕೆ ಪತ್ರವನ್ನು ನೀಡಿ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು. ಹಾಗೂ ಪೀಣ್ಯ ಕೈಗಾರಿಕಾ ಸಂಘದವರಿಗೆ ಈ ಬಗ್ಗೆ ಪತ್ರ ಬರೆಯುವಂತೆ ಸೂಚಿಸಿದರು.
- ಸಭೆಯಲ್ಲಿ ಸದಸ್ಯರುಗಳು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಕಸ ಸಂಗ್ರಹಿಸುವ ವಾಹನಗಳು ನಿರಂತರವಾಗಿ ನಿಂತಿರುವುದಾಗಿ ತಿಳಿಸಿದರು. ನಂತರ ನೋಡಲ್ ಅಧಿಕಾರಿಯವರು ಮಾತನಾಡಿ ಈ ಬಗ್ಗೆ ಪರಿಶೀಲಿಸಿ ಮುಂದಿನ ಸಭೆಯಲ್ಲಿ ವರದಿ ನೀಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.
- ವಾಡ್ ವ್ಯಾಪ್ತಿಯಲ್ಲಿ ಬೀದಿಬದಿ ವ್ಯಾಪಾರಿಗಳು ರಸ್ತೆ ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡದಂತೆ ಎಚ್ಚರಿಕೆ ನೀಡುವಂತೆ ನೋಡಲ್ ಅಧಿಕಾರಿಯವರು ಸಂಬಂಧಪಟ್ಟ ಅಧಿಕಾರಿಯವರಿಗೆ ಸಭೆಯಲ್ಲಿ ತಿಳಿಸಿದರು.

**2) ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ಮತದಾರರ ಗುರುತಿನ ಚೀಟಿಯ ಅಭಿಯಾನ ಮಾಡಬೇಕೆಂದು ನೋಡಲ್ ಅಧಿಕಾರಿಯವರು ಸಂಬಂಧಪಟ್ಟ ಅಧಿಕಾರಿಯವರಿಗೆ ಸಭೆಯಲ್ಲಿ ತಿಳಿಸಿದರು.
- ಮುಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಬಿ.ಎಲ್.ಓ ಗಳ ಪಟ್ಟಿಯನ್ನು ನೀಡುವಂತೆ ಸಹ ಕಂದಾಯ ಅಧಿಕಾರಿಯವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ಪಾವತಿಸಿ ಕೊಳ್ಳುವಾಗ ಕಂದಾಯ ಪರಿವೀಕ್ಷಕರು ಹಾಗೂ ಕಂದಾಯ ವಸೂಲಿಗಾರರು ಕಂದಾಯ ವಸೂಲಿ ಮಾಡುವ ಸಂದರ್ಭದಲ್ಲಿ ಕಂದಾಯವನ್ನು ಸರಿಯಾಗಿ ವಸೂಲಿ ಮಾಡುತ್ತಿರುವುದಿಲ್ಲ. ಇದರ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಸಹ ಕಂದಾಯ ಅಧಿಕಾರಿಯವರಿಗೆ ಸೂಚಿಸಿದರು.

**3) ವಾರ್ಡ್ ವ್ಯಾಪ್ತಿಯಲ್ಲಿನ ಪೋಲೀಸ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಪೀಣ್ಯ ಪೋಲೀಸ್ ಠಾಣೆ ಸಿಬ್ಬಂದಿಯವರು ಸಾರ್ವಜನಿಕರ ದೂರುಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲವೆಂದು ವಾರ್ಡ್ ಕಮಿಟಿ ಸದಸ್ಯರಾದ ಶ್ರೀಮತಿ.ಮಂಗಳಮ್ಮ ರವರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ನೋಡಲ್

11/4

ಅಧಿಕಾರಿಯವರು ಮಾತನಾಡಿ ಇದನ್ನು ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಯವರಿಗೆ ಸೂಚಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿನ ರಾಜ್‌ಕುಮಾರ್ ಬಾರ್, ಸಂಗಮ್ ಬಾರ್, ಮಧು ವೈನ್ಸ್ ಹಾಗೂ ಮೀನಾಕ್ಷಿ ಬಾರ್‌ಗಳ ಹತ್ತಿರ ಸಂಜೆಯ ಸಮಯದಲ್ಲಿ ವಾಹನಗಳ ಓಡಾಟಕ್ಕೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸದರಿ ಬಾರ್‌ಗಳಿಗೆ ದಂಡವನ್ನು ವಿಧಿಸಿ ಎಚ್ಚರಿಕೆ ನೀಡಿ ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

**4) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಗ್ಗೆ ಚರ್ಚಿಸಲಾದ ವಿಷಯಗಳು**

- ಗಂಗಾ ಇಂಟರ್ ನ್ಯಾಷನಲ್ ಸ್ಕೂಲ್ ಹತ್ತಿರ ದಿನಾಂಕ: 24/04/2022 ರ ಒಳಗಾಗಿ ಡಿ.ಐ ಪೈಪ್‌ಲೈನ್ ಕಾಮಗಾರಿಯನ್ನು ಪೂರ್ಣಗೊಳಿಸಬೇಕಾಗಿ ಸೂಚಿಸಲಾಯಿತು. ಮತ್ತು 'ಡಿ' ಗ್ರೂಪ್ ಬಡಾವಣೆಯಲ್ಲಿ 250 ಮೀಟರ್ ಪೈಪ್‌ಲೈನ್ ಕಾಮಗಾರಿಯನ್ನು ಪೂರ್ಣಗೊಳಿಸಬೇಕೆಂದು ಸಭೆಯಲ್ಲಿ ಸದಸ್ಯರುಗಳು ಸರ್ವಾನುಮತದಿಂದ ಸೂಚಿಸಿದರು.
- ಮೆಘಾ ಕನ್‌ಸ್ಟ್ರಕ್ಷನ್ ವತಿಯಿಂದ ಪೈಪ್ ಲೈನ್ ಕಾಮಗಾರಿ ಮಾಡಿದ ಸ್ಥಳಗಳಲ್ಲಿ ಧೂಳು ನಿಯಂತ್ರಣ ಮಾಡಲು ಟ್ಯಾಂಕರ್‌ಗಳ ಮೂಲಕ ನೀರು ಸಿಂಪಡಣೆ ಮಾಡುತ್ತಿದ್ದು, ದಿನಕ್ಕೆ 12 ಟ್ಯಾಂಕರ್ ನೀರನ್ನು ಹಾಕುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಮೆಘಾ ಕನ್‌ಸ್ಟ್ರಕ್ಷನ್ ವತಿಯಿಂದ ಪೈಪ್ ಲೈನ್ ಕಾಮಗಾರಿ ನಡೆಯುತ್ತಿದ್ದು, ಪೂರ್ಣಗೊಂಡ ಸ್ಥಳಗಳಲ್ಲಿ ಗುಂಡಿಗಳನ್ನು ಸರಿಯಾಗಿ ಮುಚ್ಚಿ ಡಾಂಭರೀಕರಣ ಮಾಡುವಂತೆ ಸದಸ್ಯರುಗಳು ಸಭೆಯಲ್ಲಿ ಚರ್ಚಿಸಿದರು.
- ಮೆಘಾ ಕನ್‌ಸ್ಟ್ರಕ್ಷನ್ ರವರು ಸರಿಯಾಗಿ ಕಾರ್ಯನಿರ್ವಹಿಸದೆ ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ರವರಿಗೆ ಪತ್ರ ಬರೆಯುವುದಾಗಿ ಸಭೆಯಲ್ಲಿ ಸೂಚಿಸಲಾಯಿತು.

**5) ವಾರ್ಡ್ ವ್ಯಾಪ್ತಿಯಲ್ಲಿನ ಬೆಸ್ಕಾಂ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಬೆಸ್ಕಾಂ ಇಲಾಖೆಗೆ ಸಂಬಂಧಿಸಿದಂತೆ ಮುಂದಿನ ಸಭೆಯೊಳಗಾಗಿ ದೊಡ್ಡಬಿದರಕಲ್ಲು ಹಾಗೂ ಚನ್ನನಾಯಕನಪಾಳ್ಯ ಭಾಗಗಳ ರಸ್ತೆಯಲ್ಲಿರುವ ವಿದ್ಯುತ್ ಕಂಬಗಳನ್ನು ಹಾಗೂ ಟ್ರಾನ್ಸ್‌ಫಾರ್ಮರ್ ಸ್ಥಳಾಂತರಿಸುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಪತ್ರ ಬರೆಯಲು ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿಯವರಿಗೆ ಸಭೆಯಲ್ಲಿ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಗೆ ಸಂಬಂಧಪಟ್ಟಂತೆ ರಸ್ತೆ ಅಗೆತ ಮಾಡಲು ಬಿ.ಬಿ.ಎಂ.ಪಿ ಯಿಂದ ಕಡ್ಡಾಯವಾಗಿ ಅನುಮತಿ ಪಡೆಯಲು ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ಯವರು ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.

**6) ವಾರ್ಡ್ ವ್ಯಾಪ್ತಿಯಲ್ಲಿನ ಕಲ್ಯಾಣ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಒಂಟಿ ಮನೆ ಯೋಜನೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಯವರಿಗೆ ಸೂಚಿಸಿದರು.

**7) ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ಬಫರ್ ಜೋನ್ ಹಾಗೂ ರಾಜಕಾಲುವೆ ಒತ್ತುವರಿ ಮಾಡಿ ಕಟ್ಟಡ ನಿರ್ಮಿಸಿರುವವರಿಗೆ ನೋಟೀಸ್ ನೀಡಿ ಕಟ್ಟಡ ತೆರವುಗೊಳಿಸಿ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಮೇಲ್ಛಾವಣಿ ಮೇಲೆ ಅನಧಿಕೃತವಾಗಿ ಟವರ್ ಅಳವಡಿಸಿರುವ ಕಟ್ಟಡಗಳ ಮಾಲೀಕರುಗಳಿಗೆ ನೋಟೀಸ್ ನೀಡಿ ಟವರ್ ಅನ್ನು ತೆರವುಗೊಳಿಸಲು ಸೂಕ್ತ ಕ್ರಮಕೈಗೊಳ್ಳುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿನ ವಿದ್ಯಾಮಾನ್ಯ ನಗರ ಹಾಗೂ ಆಚಾರ್ಯ ಕಾಲೇಜು ರಸ್ತೆಯನ್ನು ಮುಂದಿನ ಸಭೆಯೊಳಗಾಗಿ ಡಾಂಭರೀಕರಣ ಕೆಲಸವನ್ನು ಮಾಡಬೇಕಾಗಿ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.
- ದಿನಾಂಕ: 11/04/2022 ರಂದು ನೀರು ಗಂಟಿಗಳ ಸಭೆಯನ್ನು ನಡೆಸುವಂತೆ ಸದಸ್ಯರುಗಳು ಸಭೆಯಲ್ಲಿ ತಿಳಿಸಿದರು.

11/4

**8) ವಾರ್ಡ್ ವ್ಯಾಪ್ತಿಯಲ್ಲಿನ ಯೋಜನೆ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್ ಗಳನ್ನು ಕೊರೆಸಲು ಸ್ಥಳ ಗುರುತಿಸಿ ಕೊಡುವಂತೆ ಸಹಾಯಕ ಅಭಿಯಂತರರಾದ ಶ್ರೀ.ರಮೇಶ್.ಟಿ ರವರು ಸಭೆಯಲ್ಲಿ ತಿಳಿಸಿದರು.
- ಸಹಾಯಕ ಅಭಿಯಂತರರು ಮಾತನಾಡಿ ಪಾಲಿಕೆ ವ್ಯಾಪ್ತಿಗೆ ಬರುವ ಉದ್ಯಾನವನಗಳಲ್ಲಿನ ಸಿವಿಲ್ ಕಾಮಗಾರಿಗೆ ಸಂಬಂಧಿಸಿದ ಸಿವಿಲ್ ನಿರ್ವಹಣೆ/ರಿಪೇರಿ/ದುರಸ್ಥಿ ಕೆಲಸವನ್ನು 10 ಲಕ್ಷಗಳು ಮೀರದಂತೆ ಮುಖ್ಯ ಅಭಿಯಂತರರು (ಟಿ.ವಿ.ಸಿ.ಸಿ) ರವರ ತಾಂತ್ರಿಕ ಮಂಜೂರಾತಿ ಪಡೆದು ಕಾಮಗಾರಿಯನ್ನು ಕೈಗೊಳ್ಳುವುದು ಹಾಗೂ ರೂ.10 ಲಕ್ಷಕ್ಕಿಂತ ಮೇಲ್ಪಟ್ಟ ಕಾಮಗಾರಿಯನ್ನು ವಲಯದ ಮುಖ್ಯ ಅಭಿಯಂತರರು/ಕಾರ್ಯಪಾಲಕ ಅಭಿಯಂತರರು ಯೋಜನೆ ರವರಿಂದ ಕೈಗೊಳ್ಳುವುದು ಎಂಬುವುದಾಗಿ ಆಯುಕ್ತರು ರವರು ನಿರ್ದೇಶನ ನೀಡಿರುವುದಾಗಿ ಸಭೆಯಲ್ಲಿ ತಿಳಿಸಿದರು.

**9) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯ್ಯೂ.ಎಸ್.ಎಸ್.ಬಿ (ಎಸ್.ಟಿ.ಪಿ) ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿ ಎಸ್.ಟಿ.ಪಿ ನಿಂದ ದೊಡ್ಡಬಿದರಕಲ್ಲು ಕೆರೆಗೆ ನೀರು ಹರಿಸುವ ಸಂಬಂಧ ಅಂದಾಜು ಪಟ್ಟಿಯನ್ನು ಮುಂದಿನ ಸಭೆಯಲ್ಲಿ ನೀಡುವಂತೆ ನೋಡಲ್ ಅಧಿಕಾರಿಗಳು ಶ್ರೀ.ವಿವೇಕ್.ಎಂ, ಸಹಾಯಕ ಅಭಿಯಂತರರು (ಎಸ್.ಟಿ.ಪಿ) ರವರಿಗೆ ಸಭೆಯಲ್ಲಿ ತಿಳಿಸಿದರು.

**10) ವಾರ್ಡ್ ವ್ಯಾಪ್ತಿಯಲ್ಲಿನ ಘನ ತ್ಯಾಜ್ಯ ನಿರ್ವಹಣಾ ಘಟಕ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ತಿಪ್ಪೇನಹಳ್ಳಿ ಘನ ತ್ಯಾಜ್ಯ ನಿರ್ವಹಣಾ ಘಟಕದಿಂದ ಅತಿಯಾದ ದುರ್ವಾಸನೆ ಬರುತ್ತಿರುವುದಾಗಿ ಸಾರ್ವಜನಿಕರಿಂದ ದೂರು ಬಂದಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿನ ತಿಪ್ಪೇನಹಳ್ಳಿ ಘನ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ಹಸಿರು ಪ್ರದೇಶವನ್ನು ಅಭಿವೃದ್ಧಿಪಡಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

**11) ವಾರ್ಡ್ ವ್ಯಾಪ್ತಿಯಲ್ಲಿನ ಎಸ್.ಡಬ್ಲ್ಯ್ಯೂ.ಡಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯ್ಯೂ.ಎಸ್.ಎಸ್.ಬಿ ವತಿಯಿಂದ ರಾಜಕಾಲುವೆಯಲ್ಲಿ ಒಳಚರಂಡಿ ಕೊಳವೆ ಮಾರ್ಗವನ್ನು ಅಳವಡಿಸುವ ಮುನ್ನ ಮುಖ್ಯ ಅಭಿಯಂತರರು, ಬೃಹತ್ ಮಳೆ ನೀರುಗಾಲುವೆ ರವರಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕೆಂದು ಸಂಬಂಧಪಟ್ಟ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ರಾಜಕಾಲುವೆ ಒತ್ತುವರಿಯಾಗಿರುವ ಬಗ್ಗೆ ವಾರ್ಡ್‌ನ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಇಲಾಖೆಯ ಸಹಾಯಕ ಅಭಿಯಂತರರವರಿಗೆ ವರದಿ ನೀಡಲು ಸೂಚಿಸಿದರು.

**ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು.**

**ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.**

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ.40, ದೊಡ್ಡಬಿದರಕಲ್ಲು**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.40, ದೊಡ್ಡಬಿದರಕಲ್ಲು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:-**

**ಅಧಿಕಾರಿಗಳ ಮಾಹಿತಿಗಾಗಿ**

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ. ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಮಾನ್ಯ ತಹಶೀಲ್ದಾರ್ ಬೆಂಗಳೂರು ಉತ್ತರ ತಾಲ್ಲೂಕು ರವರ ಮಾಹಿತಿಗಾಗಿ ಕಳುಹಿಸಿದೆ.

5. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ ರವರ ಮಾಹಿತಿಗಾಗಿ ಕಳುಹಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
14. ವಲಯ ಅರಣ್ಯಾಧಿಕಾರಿಗಳು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳು ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
16. ತೋಟಗಾರಿಕೆ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
17. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.40, ದೊಡ್ಡಬಿದರಕಲ್ಲು ರವರ ಮಾಹಿತಿಗಾಗಿ ಕಳುಹಿಸಿದೆ.
18. ಪೊಲೀಸ್ ಇನ್ಸ್‌ಪೆಕ್ಟರ್, ಪೀಣ್ಯ/ಬ್ಯಾಡರಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.
19. ಪರಿಸರ ಅಧಿಕಾರಿಗಳು ಮಾಲಿನ್ಯ ನಿಯಂತ್ರಣ ಮಂಡಳಿ ರವರ ಮಾಹಿಗಾಗಿ ಕಳುಹಿಸಿದೆ.